ಶುಕ್ರವಾರ 08.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 19 Digital Varthe Kannada Daily Volume 01 - Issue 19 Firday 08.08.2025 Price: 5/- Rs 2 Pages Bangalore Rural

DIGITAL VARTHE

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ


www.digitalvarthe.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಕರ್ನಾಟಕದಲ್ಲಿ "ಮತಗಳ್ಳತನ" ಆರೋಪ:ದಾಖಲೆ ಬಿಡುಗಡೆ ಮಾಡಿದ ರಾಹುಲ್ ಗಾಂಧಿ




ನವದೆಹಲಿ: 2024ರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಮತ್ತು ಕರ್ನಾಟಕದಲ್ಲಿ ಲೋಕಸಭೆ ಚುನಾವಣೆಯಲ್ಲಿ "ಮತಗಳ್ಳತನ" ನಡೆದಿದೆ ಎಂದು ಗಂಭೀರ ಆರೋಪ ಮಾಡಿದ್ದ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಗುರುವಾರ ಚುನಾವಣಾ ಅಕ್ರಮಕ್ಕೆಸಂಬಂಧಿಸಿದಂತೆ ಸ್ಫೋಟಕ ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ.

ದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ದಾಖಲೆಗಳನ್ನು ಬಹಿರಂಗಪಡಿಸಿದ ರಾಹುಲ್ ಗಾಂಧಿ ಭಾರತೀಯ ಚುನಾವಣಾ ಆಯೋಗವು ಆಡಳಿತಾರೂಢ ಬಿಜೆಪಿಯೊಂದಿಗೆ ಕೈಜೋಡಿಸಿದೆ ಎಂದು ಆರೋಪಿಸಿದರು.

ಕರ್ನಾಟಕದ ಬೆಂಗಳೂರಿನ ಮಹದೇವಪುರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ದೊಡ್ಡ ಪ್ರಮಾಣದ ಅಕ್ರಮ ನಡೆದಿರುವ ಬಗ್ಗೆ ದಾಖಲೆಗಳನ್ನು ಬಹಿರಂಗಪಡಿಸಿದ್ದಾರೆ. ಇದು ದೇಶದಲ್ಲಿ ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆಯ ಬಗ್ಗೆ ವ್ಯಾಪಕ ಕಳವಳವನ್ನು ಹುಟ್ಟುಹಾಕಿದೆ.

ಮತಗಳ್ಳತನದ ವಿರುದ್ಧ ಶುಕ್ರವಾರ ಬೆಂಗಳೂರಿನಲ್ಲಿ ಕಾಂಗ್ರೆಸ್‌ನಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಇದಕ್ಕೂ ಮುನ್ನ ಮತಗಳ್ಳತನದ ಸ್ಫೋಟಕ ದಾಖಲೆಯನ್ನು ರಾಹುಲ್ ಗಾಂಧಿ ದೆಹಲಿಯಲ್ಲಿ ಬಿಡುಗಡೆ ಮಾಡಿದ್ದಾರೆ.

ನಮ್ಮ ಪಕ್ಷವು ಮಹಾರಾಷ್ಟ್ರ ಚುನಾವಣೆಯಲ್ಲಿ ಅಕ್ರಮ ನಡೆದಿರುವ ಬಗ್ಗೆ ದೀರ್ಘಕಾಲದಿಂದ ಶಂಕಿಸಿತ್ತು ಮತ್ತು ಅಂತಿಮ ಫಲಿತಾಂಶ ಅವರ ಕೆಟ್ಟ ಭಯವನ್ನು ದೃಢಪಡಿಸಿದೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

"ಮಹಾರಾಷ್ಟ್ರ ಫಲಿತಾಂಶ ವಿಧಾನಸಭಾ ಚುನಾವಣೆಯನ್ನು ನಮ್ಮಿಂದ ಕದ್ದಿದೆ ಎಂಬ ನಮ್ಮ ಅನುಮಾನವನ್ನು ದೃಢಪಡಿಸಿದೆ". "ಮೆಶಿನ್ ರಿಡೇಬಲ್ ಮತದಾರರ ಪಟ್ಟಿಯನ್ನು ನೀಡಲು ಚುನಾವಣಾ ಆಯೋಗ ನಿರಾಕರಿಸಿರುವುದು ಬಿಜೆಪಿಯೊಂದಿಗೆ ಅದು ಒಪ್ಪಂದ ಮಾಡಿಕೊಂಡಿರುವುದು ನಮಗೆ ಮನವರಿಕೆ ಮಾಡಿಕೊಟ್ಟಿದೆ" ಎಂದಿದ್ದಾರೆ.




ಇನ್ನು ಕರ್ನಾಟಕದಲ್ಲಿ, ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 6.5 ಲಕ್ಷ ಮತಗಳಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಮತಗಳನ್ನು ಅಕ್ರಮವಾಗಿ ಚಲಾಯಿಸಲಾಗಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದರು.

"ಒಂದು ಲಕ್ಷಕ್ಕೂ ಹೆಚ್ಚು ಮತಗಳ 'ವೋಟ್ ಚೋರಿ' ಆಗಿದೆ". ಕಾಂಗ್ರೆಸ್ ಸತ್ಯ ಶೋಧನಾ ತಂಡವು ಆ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯ ನಕಲಿ ಮತದಾರರು, ಅಮಾನ್ಯ ವಿಳಾಸಗಳು ಮತ್ತು ಬೃಹತ್ ಸೇರ್ಪಡೆಗಳನ್ನು ಕಂಡುಕೊಂಡಿದೆ ಎಂದು ಕಾಂಗ್ರೆಸ್ ನಾಯಕ ಆರೋಪಿಸಿದರು.

ಮಹದೇವಪುರದಲ್ಲಿ ನಕಲಿ ವಿಳಾಸಗಳನ್ನು ಹೊಂದಿರುವ '40,009' ಮತದಾರರಿದ್ದಾರೆ. 'ಮನೆ ಸಂಖ್ಯೆ 0' ಎಂಬ ಅಡ್ರೆಸ್ ಇರುವ ಹಲವರು ನೋಂದಾಯಿಸಿಕೊಂಡಿದ್ದಾರೆ. ಒಂದು ಪ್ರಕರಣದಲ್ಲಿ, 46 ಮತದಾರರು ಒಂದೇ ರೂಮಿನ ವಿಳಾಸದ ಅಡಿಯಲ್ಲಿ ನೋಂದಾಯಿಸಲ್ಪಟ್ಟಿದ್ದಾರೆ. ಆದರೆ ಆ ಸ್ಥಳಕ್ಕೆ ಭೇಟಿ ನೀಡಿದಾಗ, ಯಾರೂ ಅಲ್ಲಿ ವಾಸಿಸುತ್ತಿಲ್ಲ ಎಂದು ಗೊತ್ತಾಯಿತು ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ. ನಕಲಿ ವಿಳಾಸಗಳೊಂದಿಗೆ 40,000 ನಮೂದುಗಳು ಮತ್ತು ಯಾವುದೇ ಫೋಟೋಗಳಿಲ್ಲದ ಸುಮಾರು 4,000 ನೋಂದಾಯಿತ ಮತದಾರರಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಅಂಕಿಅಂಶಗಳನ್ನು ಉಲ್ಲೇಖಿಸಿದ ರಾಹುಲ್ ಗಾಂಧಿ, ಮಹಾರಾಷ್ಟ್ರದಲ್ಲಿ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳ ನಡುವೆ, ಕೇವಲ ಐದು ತಿಂಗಳೊಳಗೆ ಒಂದು ಕೋಟಿಗೂ ಹೆಚ್ಚು ಹೊಸ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸಲಾಗಿದೆ ಎಂದು ಆರೋಪಿಸಿದರು.

ಐದು ವರ್ಷಗಳ ಅವಧಿಯಲ್ಲಿ ಸೇರಿಸಲಾದ ಮತದಾರರಿಗಿಂತ ಹೆಚ್ಚು ಮತದಾರರನ್ನು ಕೇವಲ ಐದು ತಿಂಗಳಲ್ಲಿ ಹಠಾತ್ ಸೇರಿಸಿದ್ದು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಅವರು ಹೇಳಿದರು.







Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ತಿಂಗಳಾಂತ್ಯದೊಳಗೆ ಒಳಮೀಸಲು ಖಚಿತ: ಹೆಚ್ ಆಂಜನೇಯ



ಚಿತ್ರದುರ್ಗ: ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಗುರುವಾರದ ನಡೆದ ಸಚಿವ ಸಂಪುಟ ಸಭೆ ಮಾದಿಗ ಸೇರಿ ಪರಿಶಿಷ್ಟ ಜಾತಿ ಗುಂಪಿನಲ್ಲಿನ 101 ಜಾತಿಗಳಿಗೆ ಸಿಹಿಸುದ್ದಿಯ ಸೂಚನೆ ನೀಡಿದ್ದು, ಈ ತಿಂಗಳಾಂತ್ಯದೊಳಗೆ ಒಳಮೀಸಲಾತಿ ಜಾರಿಗೊಳ್ಳಲಿದೆ ಎಂಬ ವಿಶ್ವಾಸವನ್ನು ಮಾಜಿ ಸಚಿವ ಎಚ್.ಆಂಜನೇಯ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಹೇಳಿಕೆ ನೀಡಿರುವ ಆಂಜನೇಯ, ದೇಶದಲ್ಲಿಯೇ ಪ್ರಥಮ ಬಾರಿಗೆ ಅತ್ಯಂತ ವೈಜ್ಞಾನಿಕವಾಗಿ ಜಾತಿಗಣತಿ ಸಮೀಕ್ಷೆ ನಡೆಸಿದ ನ್ಯಾ. ನಾಗಮೋಹನ್ ದಾಸ್ ಆಯೋಗದ ಕಾರ್ಯ ಶ್ಲಾಘನೀಯ ಎಂದಿದ್ದಾರೆ.

ಬರೋಬ್ಬರಿ 60 ದಿನಗಳ ಕಾಲ 1 ಕೋಟಿ 7 ಲಕ್ಷ ಜನರನ್ನು ಸಮೀಕ್ಷೆ ನಡೆಸಿ, ಅವರವರ ಜನಸಂಖ್ಯೆ, ಹಿಂದುಳಿಯುವಿಕೆ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪರಿಸ್ಥಿತಿಯನ್ನು ವೈಜ್ಞಾನಿಕವಾಗಿ ದಾಖಲಿಸಿರುವುದು ಐತಿಹಾಸಿಕ ದಾಖಲೆಯಾಗಿದೆ. ಯಾರೊಬ್ಬರು ಜಾತಿಗಣತಿಯಿಂದ ಹೊರಗುಳಿಯದಂತೆ ಮನೆ ಮನೆ ಭೇಟಿ, ಬ್ಲಾಕ್ ಮಟ್ಟ, ಆನ್ ಲೈನ್ ಮೂರು ರೀತಿ ನೋಂದಣಿಗೆ ಅವಕಾಶ ನೀಡುವ ಮೂಲಕ ಸಣ್ಣ ಅಪಸ್ವರಕ್ಕೂ ಅವಕಾಶ ಇಲ್ಲದಂತೆ ಸಮೀಕ್ಷೆ ನಡೆಸಲಾಗಿದ್ದು, ಇದು ಅತ್ಯಂತ ವೈಜ್ಞಾನಿಕ ವರದಿ ಎಂಬುದಕ್ಕೆ ಉತ್ತಮ ಉದಾಹರಣೆ ಆಗಿದೆ ಎಂದಿದ್ದಾರೆ.

ವರದಿ ಸಲ್ಲಿಕೆ, ಜಾರಿ ಆಗಲಿದೆ ಎಂಬ ಅನಗತ್ಯ ಆರೋಪ, ಹೋರಾಟಗಳಿಗೆ ಆಯೋಗದ ನಡೆ, ಸಚಿವ ಸಂಪುಟದ ನಿರ್ಧಾರ ಸ್ಪಷ್ಟ ಉತ್ತರ ನೀಡಿದೆ ಎಂದಿದ್ದಾರೆ.

ಪ್ರಜಾಪ್ರಭುತ್ವದಡಿ ಸರ್ವರ ಅಭಿಪ್ರಾಯದಡಿ ಒಳಮೀಸಲಾತಿ ಜಾರಿಗೆ ದಿಟ್ಟ ನಿರ್ಧಾರ ಗುರುವಾರದ ಸಚಿವ ಸಂಪುಟ ಕೈಗೊಂಡಿರುವುದು ಸ್ವಾಗತರ್ಹ. ಮುಂದಿನ (ಆಗಸ್ಟ್ 14) ಸಚಿವ ಸಂಪುಟ ಸಭೆಯಲ್ಲಿ ವರದಿಗೆ ಅಧಿಕೃತವಾಗಿ ಒಪ್ಪಿಗೆ ಮುದ್ರೆ ನೀಡಿ, ಬರುವ ಅಧಿವೇಶನದಲ್ಲಿ ಮಂಡಿಸಿ, ಬಿಲ್ ಪಾಸು ಮಾಡಿ ಕಾನೂನು ರಚಿಸಿ ರಾಜ್ಯಪಾಲರಿಗೆ ಕಳುಹಿಸಿ ಒಪ್ಪಿಗೆ ಪಡೆಯಬೇಕು.

ಈ ಎಲ್ಲ ಪ್ರಕ್ರಿಯೆಗಳು ಆಗಸ್ಟ್ ತಿಂಗಳಲ್ಲಿಯೇ ಪೂರ್ಣಗೊಂಡು ಮಾದಿಗರಿಗೆ ಮೀಸಲಾತಿ ಸ್ವಾತಂತ್ರ್ಯ ನೀಡಬೇಕು. ಈ ನಿಟ್ಟಿನಲ್ಲಿ ಸಾಮಾಜಿಕ ಹರಿಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬದ್ಧತೆ ಪ್ರಶ್ನಾತೀತವಾಗಿದ್ದು, ದಿಟ್ಟ ನಡೆ ಕೈಗೊಳ್ಳುವುದು ಖಚಿತ ಎಂಬ ವಿಶ್ವಾಸವನ್ನು ಆಂಜನೇಯ ವ್ಯಕ್ತಪಡಿಸಿದ್ದಾರೆ.



ತೋಟಗಾರಿಕೆ ಇಲಾಖೆ ಲಾಲ್ ಬಾಗ್ ಬೆಂಗಳೂರು ಇವರ ವತಿಯಿಂದ ಲಾಲ್ ಬಾಗ್ ನಾ ಗಾಜಿನ ಮನೆ ಯಲ್ಲಿ ಆಯೋಜಿಸಲಾಗಿದ್ದ ವೀರ ರಾಣಿ ಕಿತ್ತೂರು ಚೆನ್ನಮ್ಮ ಮತ್ತು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ವಿಷಯಾಧರಿತ ಸ್ವಾತಂತ್ರೋತ್ಸವ 218 ನೇ ಫಲಪುಷ್ಪ ಪ್ರದರ್ಶನ -2025 ರಲ್ಲಿ ಅನಾವರಗೊಂಡ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆ

# ರಾಜ್ಯ ಸಚಿವ ಸಂಪುಟ ಸಭೆ: ದೇವದಾಸಿ ಪದ್ಧತಿ ತಡೆ ಸೇರಿದಂತೆ 17 ಬಿಲ್ ಗಳಿಗೆ ಅನುಮೋದನೆ

ಬೆಂಗಳೂರು: ದೇವದಾಸಿ ಮಹಿಳೆಯರನ್ನು ಎಲ್ಲಾ ರೀತಿಯ ಶೋಷಣೆಯಿಂದ ಮತ್ತು ಅವರ ಮಕ್ಕಳನ್ನು ಸಬಲೀಕರಣದ ಮೂಲಕ ಸಾಮಾಜಿಕ ನಿಷೇಧಗಳಿಂದ ಮುಕ್ತಗೊಳಿಸುವ ಉದ್ದೇಶದ ಮಸೂದೆ ಸೇರಿದಂತೆ 17 ಮಸೂದೆಗಳಿಗೆ ರಾಜ್ಯ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ. ಈ ಎಲ್ಲ ವಿಧೇಯಕಗಳನ್ನು ಆಗಸ್ಟ್ 11ರಿಂದ ನಡೆಯಲಿರುವ ಅಧಿವೇಶನದಲ್ಲಿ ಮಂಡಿಸಿ, ಅಂಗೀಕರಿಸುವ ಸಾಧ್ಯತೆ ಇದೆ.

"ಕರ್ನಾಟಕ ದೇವದಾಸಿ (ತಡೆ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ಮಸೂದೆ- 2025 ಅನ್ನು ಸಂಪುಟ ಅನುಮೋದಿಸಿದೆ ಮತ್ತು ಶೋಷಣೆಗೆ ಒಳಗಾದ ದೇವದಾಸಿ ಮಹಿಳೆಯರನ್ನು ಎಲ್ಲಾ ರೀತಿಯ ಶೋಷಣೆಯಿಂದ ವಿಮೋಚನೆಗೊಳಿಸುವುದು, ಅವರ ಮಕ್ಕಳನ್ನು ಸಬಲೀಕರಣದ ಮೂಲಕ ಸಾಮಾಜಿಕ ನಿಷೇಧಗಳಿಂದ ಮುಕ್ತಗೊಳಿಸುವುದು ಈ ಮಸೂದೆಯ ಪ್ರಮುಖ ಉದ್ದೇಶವಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಸುದ್ದಿಗಾರರಿಗೆ ತಿಳಿಸಿದರು.

ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ದೇವದಾಸಿಯರ ಮಕ್ಕಳಿಗಾಗಿ ಅರ್ಜಿ ನಮೂನೆಗಳು ಮತ್ತು ಅಧಿಕೃತ ದಾಖಲೆಗಳಲ್ಲಿ ತಂದೆಯ ಹೆಸರಿನ ಅಗತ್ಯವನ್ನು ತೆಗೆದುಹಾಕಲು ಇದು ಉದ್ದೇಶಿಸಿದೆ. ದೇವದಾಸಿಗೆ ಮಗನಿದ್ದರೆ, ಆತನ ತಂದೆಯ ಹೆಸರಿನ ಬದಲು ತನ್ನ ಹೆಸರು, ಇಲ್ಲವೇ ತನ್ನ ಉಪನಾಮ ಅಥವಾ ತಾಯಿಯ ಹೆಸರನ್ನು ಬರೆಯಬಹುದು ಎಂದು ಅವರು ಹೇಳಿದರು

ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಗೆ ಒಪ್ಪಿಗೆ: ಜೀವನ ಮತ್ತು ವ್ಯವಹಾರವನ್ನು ಸುಲಭಗೊಳಿಸಲು ಕರ್ನಾಟಕ ಅಪರಾಧ ಮುಕ್ತಗೊಳಿಸುವಿಕೆ (ಉಪಬಂಧಗಳ ತಿದ್ದುಪಡಿ) ವಿಧೇಯಕ, ಕರ್ನಾಟಕ ಬಂದರು (ಲ್ಯಾಂಡಿಂಗ್ ಮತ್ತು ಶಿಪ್ಪಿಂಗ್ ಫೀಸ್) ತಿದ್ದುಪಡಿ ವಿಧೇಯಕ, ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ ವಿಧೇಯಕ-2025ಕ್ಕೆ ಅನುಮೋದನೆ ನೀಡಲಾಗಿದೆ.

ಕರ್ನಾಟಕ ಭೂ ಸುಧಾರಣೆಗಳು ಮತ್ತು ಇತರೆ ಕಾನೂನು ತಿದ್ದುಪಡಿ ವಿಧೇಯಕ, ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ ವಿಧೇಯಕ) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ ವಿಧೇಯಕ) ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ, ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕ, ಕರ್ನಾಟಕ ಸರ್ಕಾರಿ ವ್ಯಾಜ್ಯನಿರ್ವಹಣೆ (ತಿದ್ದುಪಡಿ) ವಿಧೇಯಕ, ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಸೇರಿದಂತೆ 17 ವಿಧೇಯಕಗಳಿಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.

ಬೆಳಗಾವಿ ಜಿಲ್ಲೆಯ ನವಿಲು ತೀರ್ಥ ಅಣೆಕಟ್ಟಿನಿಂದ ಮಲ್ಲಪ್ರಭಾ ನದಿಯ ನೀರು ಎತ್ತುವ ಮೂಲಕ ರಾಮದುರ್ಗ ತಾಲ್ಲೂಕಿನ ಚಂದರಗಿ ಮತ್ತು ಸುತ್ತಮುತ್ತಲಿನ ಗ್ರಾಮಗಳ 8 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಹಾಗೂ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಚಾಮನಹಳ್ಳಿ ಬೈರಾನ್ ಹಾಗೂ ವೈದ್ಯನಾಥ ಪುರ ಕಾಲುವೆಗಳ ಆಧುನೀಕರಣ ಕಾಮಗಾರಿ ಕೈಗೊಳ್ಳಲು ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಸಚಿವರು ವಿವರಿಸಿದರು.

**'ರೋಹಿತ್ ವೇಮುಲಾ ಮಸೂದೆ' ಮುಂದೂಡಿಕೆ:** ಆದಾಗ್ಯೂ ಕರ್ನಾಟಕ ರೋಹಿತ್ ವೇಮುಲ (ಹೊರಗಿಡುವಿಕೆ ಅಥವಾ ಅನ್ಯಾಯ ತಡೆಗಟ್ಟುವಿಕೆ) (ಶಿಕ್ಷಣ ಮತ್ತು ಘನತೆಯ ಹಕ್ಕು ) ಮಸೂದೆ ನಿರ್ಧಾರವನ್ನು ಮುಂದೂಡಲಾಗಿದೆ. ಈ ವಿಧೇಯಕ ಕುರಿತು ಒಂದು ಬಾರಿಯೂ ಸಮಾಲೋಚನಾ ಸಭೆ ನಡೆಸಿಲ್ಲ. ಇದಕ್ಕಾಗಿ ಅದನ್ನು ಮುಂದಿನ ಸಭೆಗೆ ಮುಂದೂಡಿದ್ದೇವೆ" ಎಂದು ಸಚಿವರು ಹೇಳಿದರು.

ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ತೊಡೆದುಹಾಕುವ ಗುರಿಯನ್ನು ಈ ಕಾಯ್ದೆ ಹೊಂದಿದೆ. ಕರ್ನಾಟಕ ಸರ್ಕಾರ "ರೋಹಿತ್ ವೇಮುಲಾ ಕಾಯ್ದೆ" ಜಾರಿಗೊಳಿಸಬೇಕೆಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಏಪ್ರಿಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. 2016 ರಲ್ಲಿ ಹೈದರಾಬಾದ್‌ನಲ್ಲಿ ದಲಿತ ವಿದ್ಯಾರ್ಥಿ ರೋಹಿತ್ ವೇಮುಲಾ ಜಾತಿ ಆಧಾರಿತ ತಾರತಮ್ಯದಿಂದ ಆತ್ಮಹತ್ಯೆ ಮಾಡಿಕೊಂಡಿದ್ದರು. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯ ನಿಯಮಗಳು ಮತ್ತು ಷರತ್ತುಗಳ ಮಾನ್ಯತೆ) (ತಾಂತ್ರಿಕ ಶಿಕ್ಷಣ) ನಿಯಮಗಳಿಗೆ ತಿದ್ದುಪಡಿ ಮಾಡುವ ಮೂಲಕ ಮುಸ್ಲಿಮೇತರ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಆಯಾ ಅಲ್ಪಸಂಖ್ಯಾತ ವರ್ಗದ ಶೇ. 50 ರಷ್ಟು ವಿದ್ಯಾರ್ಥಿಗಳನ್ನು ಹೊಂದಿರಬೇಕು ಎಂಬ ನಿಯಮವನ್ನು ತೆಗೆದುಹಾಕಲು ಸಂಪುಟ ಒಪ್ಪಿಗೆ ನೀಡಿದೆ ಎಂದು ಪಾಟೀಲ್ ಹೇಳಿದರು.

ದೇವರಾಜ ಅರಸು ಅಭಿವೃದ್ಧಿ ನಿಗಮದ ಮೂಲಕ ಅಂದಾಜು 33.09 ಕೋಟಿ ರೂ. ವೆಚ್ಚದಲ್ಲಿ ಒಟ್ಟು 1,103 ಎಲೆಕ್ಟ್ರಿಕ್ ನಾಲ್ಕು ಚಕ್ರದ ವಾಹನಗಳನ್ನು ಖರೀದಿಸಿ, ಅವುಗಳನ್ನು 11 ನಿಗಮಗಳ ಮೂಲಕ ಆಹಾರ ಮಳಿಗೆ ಆರಂಭಿಸುವ ಹಿಂದುಳಿದ ವರ್ಗಗಳಿಗೆ ಸೇರಿದ ನಿರುದ್ಯೋಗಿಗಳಿಗೆ ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ರಾಜ್ಯದ 15 ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತ ಬಾಲಕಿಯರ ಶಿಕ್ಷಣಕ್ಕಾಗಿ 15 ಮಹಿಳಾ ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ 87.60 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಯಿತು ಎಂದು ಎಚ್. ಕೆ. ಪಾಟೀಲ್ ತಿಳಿಸಿದರು.

# ಧರ್ಮಸ್ಥಳ ಗಲಾಟೆ: ನಿನ್ನೆ ಏನಾಯ್ತು? ರಜತ್ ಹೇಳಿಕೆ

ಮಂಗಳೂರು: ಧರ್ಮಸ್ಥಳದ ನೇತ್ರಾವತಿಯ ಪಾಂಗಳದ ಬಳಿ ಯೂಟ್ಯೂಬರ್ಸ್ ಗಳ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಾಗಿದೆ. ಇನ್ನು ನಿನ್ನೆ ಬಿಗ್ ಬಾಸ್ ಮಾಜಿ ಸ್ಪರ್ಧಿ ರಜತ್ ಧರ್ಮಸ್ಥಳಕ್ಕೆ ಹೋಗಿದ್ದ ಸಂದರ್ಭದಲ್ಲಿ



ಹಲ್ಲೆ ನಡೆದಿತ್ತು. ಇನ್ನು ಹಲ್ಲೆಗೆ ಸಂಬಂಧಿಸಿದಂತೆ ಮಾತನಾಡಿರುವ ರಜತ್ ನಾನು ಧರ್ಮಸ್ಥಳಕ್ಕೆ ಹೋಗಿದ್ದು, ಸೌಜನ್ಯ ಪ್ರಕರಣದಲ್ಲಿ ನ್ಯಾಯ ಕೇಳೋಕೆ ಮಾತ್ರ. ನಾನು ಯಾವತ್ತೂ ಧರ್ಮಸ್ಥಳದ ಬಗ್ಗೆ ತಪ್ಪಾಗಿ ಮಾತನಾಡಿಲ್ಲ. ನಾನು ಸೌಜನ್ಯ ಕುಟುಂಬಸ್ಥರನ್ನು ಭೇಟಿ ಮಾಡೋಕೆ ಹೋಗಿದ್ದೆ. ಈ ವೇಳೆ ಯೂಟ್ಯೂಬರ್ಸ್ ಜೊತೆ ಮಾತನಾಡುತ್ತಿದ್ದಾಗಲೇ ಅಲ್ಲಿಗೆ ಬಂದ ಗುಂಪೊಂದು ಹಲ್ಲೆ ನಡೆಯಿತು ಎಂದು ತಿಳಿಸಿದ್ದಾರೆ. ಗುಂಪು ಯೂಟ್ಯೂಬರ್ಸ್‌ಗೆ ಕಾಲಿನಿಂದ ಒದ್ದು, ಕೋಲಲ್ಲಿ ಮತ್ತು ಕಲ್ಲಲ್ಲಿ ಹೊಡೆದಿದ್ದಾರೆ. 30ಕ್ಕೂ ಹೆಚ್ಚು ಜನರು ಹಲ್ಲೆ ಮಾಡಿದ್ದರಿಂದ ಏನು ಮಾಡಕ್ಕಾಗದ ಸ್ಥಿತಿಯಲ್ಲಿ ನಿಂತುಕೊಂಡಿದ್ದೇವು ಎಂದು ರಜತ್ ಕಿಶನ್ ಯೂಟ್ಯೂಬರ್ಸ್ ಮೇಲೆ ನಡೆದ ಹಲ್ಲೆ ಬಗ್ಗೆ ವಿವರಿಸಿದ್ದಾರೆ. ನನಗೆ ಈಗ ಬೆದರಿಕೆ ಕರೆಗಳು ಬರುತ್ತಿವೆ ಎಂದು ಕಿಶನ್ ಹೇಳಿದ್ದಾರೆ.

## ನ್ಯಾಯ ಕೇಳಿದರೆ ಕೋಪವೇಕೆ?- ನಟ ಪ್ರಕಾಶ್ ರಾಜ್



ಬೆಂಗಳೂರು: ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತದೇಹಗಳ ಹೊರತೆಗೆಯುವ ಕಾರ್ಯಾಚರಣೆಯನ್ನು ವರದಿ ಮಾಡಲು ಹೋಗಿದ್ದ ಯೂಟ್ಯೂಬರ್‌ಗಳ ಮೇಲೆ ನಡೆದಿರುವ ಹಲ್ಲೆ ಘಟನೆಯನ್ನು ನಟ ಪ್ರಕಾಶ್ ರಾಜ್ ಅವರು ತೀವ್ರವಾಗಿ ಖಂಡಿಸಿದ್ದಾರೆ.

ಸಾಮಾಜಿಕ ಜಾಲತಾ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಗೂಂಡಾಗಳಿಂದಲೇ ಧರ್ಮಸ್ಥಳಕ್ಕೆ ಕಳಂಕ ಬಂದಿದೆ. ದಾರುಣವಾಗಿ ಹತ್ಯೆಯಾದ ಸೌಜನ್ಯಳಿಗಾಗಿ ನ್ಯಾಯ ಕೇಳಿದರೆ, ಇವರಿಗೆ ಯಾಕೆ ಕೋಪ. ಈ ಗೂಂಡಾಗಳನ್ನು ಬಂಧಿಸಿ, ಕ್ರಮ ಕೈಗೊಳ್ಳಿ, ಸತ್ಯ ಹೊರತನ್ನಿ ಎಂದು ಆಗ್ರಹಿಸಿದ್ದಾರೆ.

ಧರ್ಮಸ್ಥಳದಲ್ಲಿ ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದ ಮಾಧ್ಯಮ ಮಿತ್ರರ ಮೇಲಿನ ಹಲ್ಲೆ ಖಂಡನಾರ್ಹ.. ಇಂತಹ ಗೂಂಡಾಗಳಿಂದಲೇ ಭಕ್ತಾದಿಗಳು ನಂಬುವ ಧರ್ಮಸ್ಥಳಕ್ಕೆ ಕಳಂಕ ಬಂದಿರುವುದು. ಸೌಜನ್ಯಾಳ ದಾರುಣ ಹತ್ಯೆಗೆ ನ್ಯಾಯ ಕೇಳಿದರೆ ಇವರಿಗೇಕೆ ಕೋಪ.. ದಯವಿಟ್ಟು ಬಂಧಿಸಿ ಸತ್ಯ ಹೊರತನ್ನಿ ಎಂದು ಒತ್ತಾಯಿಸಿದ್ದಾರೆ.

ಈ ಗೂಂಡಾಗಳ ಹಿಂದೆ ಯಾರಿದ್ದಾರೆ. ಯಾರು ಅವರನ್ನು ಕಳಿಸಿ, ಹೊಡೆಸುತ್ತಿದ್ದಾರೆ. ಅನುಮಾನ ಹೆಚ್ಚುತ್ತಿದೆ. ದಯವಿಟ್ಟು ಪೊಲೀಸರು ಗೂಂಡಾಗಳನ್ನು ಬಂಧಿಸಬೇಕು. ಸತ್ಯಾಸತ್ಯೆಯನ್ನು ತಿಳಿದುಕೊಳ್ಳಬೇಕು. ಕ್ರಮ ಕೈಗೊಳ್ಳಬೇಕು. ನ್ಯಾಯ ಕೇಳುವುದು ನಮ್ಮ ಹಕ್ಕು-ಕರ್ತವ್ಯ ಎಂದು ಹೇಳಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಯಲ್ಲಿ INDIA ಒಕ್ಕೂಟದ ನಾಯಕರ ಔತಣ ಸಭೆಯಲ್ಲಿ ಭಾಗವಹಿಸಿದರು. ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರನ್ನು ಭೇಟಿಯಾಗಿ ಪರಸ್ಪರ ಅಭಿನಂಧಿಸಿದರು.

**ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ: 9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.